ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಹೈಟೆಕ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್‌ನ ಎ.ಸಿ.ಎಫ್.ಎಫ್. ಯೋಜನೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) -

26 (242) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೆ.ಐ.ಎ.ಡಿ.ಬಿ. ವ್ಯಾಪ್ತಿಯ ಹೈಟೆಕ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಪಾರ್ಕ್ ಪ್ರದೇಶದಲ್ಲಿ ಏರೋ ಕಾಮನ್ ಫಿನಿಷಿಂಗ್ ಫೆಸಿಲಿಟಿ (ಎ.ಸಿ.ಎಫ್.ಎಫ್.) ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದಲ್ಲಿ ಮಂಜೂರು ಮಾಡಲಾದ ಮೊತ್ತವೆಷ್ಟು ; ಯೋಜನೆಯ ರೂಪು ರೇಷೆಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲಿನ ಮೊತ್ತವೆಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಸದರಿ ಯೋಜನೆ ಸಂಬಂಧ ಕಾಮಗಾರಿ ಗುತ್ತಿಗೆ ಕರೆಯಲಾಗಿದೆಯೇ ; ಯೋಜನೆ ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಯೋಜನೆ ಸಂಬಂಧ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ್ದ ಹಣವನ್ನು ಬಡ್ಡಿ ಸಮೇತ ಹಿಂಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಕೇಂದ್ರ ಸರ್ಕಾರ ಹಣ ಹಿಂಪಡೆಯಲು ಕಾರಣಗಳೇನು ?